ಶ್ರೀಮತಿ ಮೋಟಮ್ಮ: ನಾನು ಕಟ್ಟಡವನ್ನು ಒದಗಿಸಿಕೊಡಬಹುದು. ಆದರೆ ಸಂಬಳ ಕೊಡುವುದಕ್ಕೆ ಆಗುವುದಿಲ್ಲ. ಏಕೆಂದರೆ, ಆ ವಿದ್ಯಾಪೀಠದಲ್ಲಿ ಕೆಲಸ ಮಾಡುತ್ತಿರುವ ಪ್ರಿನ್ಸಿಪಾಲ್ರಿಗೆ, ಸಿಬ್ಬಂದಿಯವರಿಗೆ ಇನ್ನೂ ಸಂಬಳವನ್ನೇ ಕೊಟ್ಟಿಲ್ಲ. ಇದನ್ನು ನಾನು ಹೇಗೆ ಕೊಡುವುದಕ್ಕೆ ಬರುತ್ತದೆ?

ಶ್ರೀ ಪ್ರಭಾಕರ ಎಸ್. ರಾಣೆ: ಈಗಾಗಲೇ ಆ ಒಂದು ವಯಸ್ಕರ ಶಿಕ್ಷಣ ಸಮಿತಿಗೆ 50 ಲಕ್ಷ ರೂಪಾಯಿಗಳ ಅನುದಾನವನ್ನು ಬಿಡುಗಡೆ ಮಾಡಿದ್ದೇವೆ. ಅದರಲ್ಲಿ ಅವರು ತಮ್ಮ ಸಿಬ್ಬಂದಿಗೆ ಸಂಬಳ ಕೊಡುವ ವ್ಯವಸ್ಥೆಯನ್ನು ಮಾಡಬೇಕು. ಇನ್ನೂ ಹೆಚ್ಚು ಬೇಕು ಎಂದು ಹೇಳಿದಾಗ ಮತ್ತೆ ಹದಿನೆಂಟೂವರೆ ಲಕ್ಷ ರೂಪಾಯಿ ಬಿಡುಗಡೆ ಮಾಡಿದ್ದೇವೆ. ಆದ್ದರಿಂದ ಅಲ್ಲಿ ಸಂಬಳ ಕೊಡುವ ಜವಾಬ್ದಾರಿ ಆ ಶಿಕ್ಷಣ ಸಂಸ್ಥೆಯದ್ದು. ಅನುದಾನವನ್ನು ಬಿಡುಗಡೆ ಮಾಡುವುದಷ್ಟೇ ಸರ್ಕಾರದ ಜವಾಬ್ದಾರಿ.

ಅಧ್ಯಕ್ಷರು: ಪ್ರಶ್ನೋತ್ತರ ಮುಗಿಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ದಿನದ ಪಟ್ಟಿಯಲ್ಲಿ ಸೇರಿಸಲಾದ ಪ್ರಶ್ನೋತ್ತರಗಳು

ಬೆಂಗಳೂರು ನಗರದಲ್ಲಿರುವ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳು

299 - ಶ್ರೀ ಆರ್.ವಿ. ದೇವರಾಜ್ (ಚಾಮರಾಜ್): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಒಟ್ಟು ಆಂಗ್ಲ ಮಾಧ್ಯಮದ ಪ್ರೈಮರಿ ಶಾಲೆಗಳ ಸಂಖ್ಯೆ ಎಷ್ಟು?

ಆ) ಅವುಗಳ ಪೈಕಿ, ಎಷ್ಟು ಶಾಲೆಗಳು ಅನುದಾನ ಪಡೆಯುತ್ತಿದೆ. ಹಾಗೂ ಎಷ್ಟು ಶಾಲೆಗಳು ಅನುದಾನ ರಹಿತವಾಗಿರುತ್ತವೆ?

ಇ) ಎಷ್ಟು ಶಾಲೆಗಳಲ್ಲಿ ಕರ್ನಾಟಕ ಸರ್ಕಾರದ ಶಿಕ್ಷಣ ಪಠ್ಯ ಕ್ರಮಗಳನ್ನು ಅಳವಡಿಸಿಕೊಳ್ಳಲಾಗಿದೆ.

ಈ) 1993-94ನೇ ಸಾಲಿನಲ್ಲಿ ಎಷ್ಟು ಆಂಗ್ಲ ಮಾಧ್ಯಮದ ಶಾಲೆಗಳಿಗೆ ಸರ್ಕಾರ ಅನುಮತಿ ನೀಡಿದೆ.

ಉ) ಆ ಶಾಲೆಗಳಲ್ಲಿ ಮಕ್ಕಳನ್ನು ಸೇರಿಸಿಕೊಳ್ಳಲು ದೊಡ್ಡ ಪ್ರಮಾಣದಲ್ಲಿ ವಂತಿಗೆ ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಹಾಗಿದ್ದಲ್ಲಿ, ಅದನ್ನು ನಿಲ್ಲಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) 560

ಆ) ಅನುದಾನಿತ ಶಾಲೆಗಳು 42
ಅನುದಾನರಹಿತ ಶಾಲೆಗಳು 518

ಇ) 528 ಶಾಲೆಗಳಲ್ಲಿ ಈ ಪಠ್ಯ ಕ್ರಮವನ್ನು ಅಳವಡಿಸಲಾಗಿದೆ.

ಈ) 14 ಆಂಗ್ಲ ಮಾಧ್ಯಮ ಶಾಲೆಗಳಿಗೆ ಅನುಮತಿ ನೀಡಲಾಗಿದೆ.

ಉ) ಇಲ್ಲ.

ಊ) ಈ ಬಗ್ಗೆ ನಿರ್ದಿಷ್ಟವಾದ ದೂರುಗಳು ಬಂದಲ್ಲಿ ಅಂತಹ ಶಾಲೆಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು.

ಪೂರ್ವ ಪ್ರಾಥಮಿಕ ಮಕ್ಕಳ ಪ್ರವೇಶ ಕುರಿತು

345 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಜೀರಾದ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಸರ್ಕಾರವು ಪೂರ್ವ ಪ್ರಾಥಮಿಕ ಪಾಠಶಾಲೆ, ಶಿಶುವಿಹಾರ ಇನ್ನೂ ಮುಂತಾದ ಶಿಕ್ಷಣ ಸಂಸ್ಥೆಗಳಲ್ಲಿ ಪುಟ್ಟ ಮಕ್ಕಳಿಗೆ ಶಾಲೆಗೆ ಪ್ರವೇಶ ನೀಡುವ ಮೊದಲು ನಡೆಸುತ್ತಿರುವ ಸಂದರ್ಶನದ ಪದ್ಧತಿಯನ್ನು ತೊಡೆದು ಹಾಕಲು ತೀರ್ಮಾನಿಸಿರುವುದು ನಿಜವಲ್ಲವೇ?

ಆ) ಸರ್ಕಾರದ ಆ ನಿರ್ಧಾರ ಅನುದಾನ ಪಡೆಯದ ಶಾಲೆಗಳಿಗೆ ಅನ್ವಯಿಸುವುದೇ?

ಇ) ಹಾಗಿದ್ದಲ್ಲಿ ಆ ನಿಯಮವನ್ನು ಅಂತಹ ಶಾಲೆಗಳಿಗೂ ಅನ್ವಯಿಸುವಂತೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ?

ಈ) ಸರ್ಕಾರದ ಆ ನಿರ್ಧಾರ ಎಂತಹ ಶಿಕ್ಷಣ ಸಂಸ್ಥೆಗಳಿಗೆ ಅನ್ವಯಿಸುವುದು?

ಉ) ಒಂದು ವೇಳೆ ಅನುದಾನ ಪಡೆಯದ ಶಾಲೆಗಳು ಸರ್ಕಾರದ ಆ ನಿರ್ಧಾರವನ್ನು ಒಪ್ಪದೆ ಇದ್ದಲ್ಲಿ ಅಂತಹ ಶಾಲೆಗಳ ಮಾನ್ಯತೆಯನ್ನು ರದ್ದುಪಡಿಸುವ ಬಗ್ಗೆ ಸರ್ಕಾರ ಪರಿಶೀಲಿಸುವುದೇ?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಹೌದು.

ಆ) ಹೌದು.

ಇ) ಉದ್ಭವಿಸುವುದಿಲ್ಲ.

ಈ) ಎಲ್ಲಾ ಶಿಕ್ಷಣ ಸಂಸ್ಥೆಗಳಿಗೂ ಅನ್ವಯವಾಗುವುದು.

ಉ) ಹೌದು.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಹಾರ್ನಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿ) : ಮಾನ್ಯ ಅಧ್ಯಕ್ಷರೇ, ಏಳನೇ ಪಟ್ಟಿಯಲ್ಲಿರುವ 32 ಪ್ರಶ್ನೆಗಳ ಪೈಕಿ ಪ್ರಶ್ನೆಗಳ ಸಂಖ್ಯೆ 380, 350, 365, 321 ಮತ್ತು 51 ಈ ಪ್ರಶ್ನೆಗಳನ್ನು ಹೊರತುಪಡಿಸಿ ಉಳಿದ 27 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಬೀದರ್‌ನಲ್ಲಿ ಡೈರಿ ಪ್ರಾರಂಭಿಸುವುದು

379 - ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಪ್ರತಿದಿನ ಉತ್ಪಾದನೆಯಾಗುತ್ತಿರುವ ಹಾಲಿನ ಪ್ರಮಾಣವೆಷ್ಟು?

ಆ) ನೆರೆಯ ಗುಲ್ಬರ್ಗಾ ಜಿಲ್ಲೆಯಲ್ಲಿ ಪ್ರತಿದಿನ ಉತ್ಪಾದನೆಯಾಗುತ್ತಿರುವ ಹಾಲಿನ ಪ್ರಮಾಣವೆಷ್ಟು?